ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಶುಕ್ರವಾರ, ದಿನಾಂಕ 19ನೇ ಜುಲೈ, 2019

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಎಂಪ್ಲಾಯೀಸ್ ವೆಲ್‌ಫೇರ್ ಅಸೋಸಿಯೇಷನ್ ಸಂಘದ ಅವ್ಯವಹಾರಗಳ ಬಗ್ಗೆ

ಶ್ರೀ ಆಯನೂರು ಮಂಜುನಾಥ್ (ಪದವೀಧರರ ಕ್ಷೇತ್ರ):-

359 (439) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಎಂಪ್ಲಾಯೀಸ್ ವೆಲ್‌ಫೇರ್ ಅಸೋಸಿಯೇಶನ್ (ರಿ) ನಲ್ಲಿ ಅವ್ಯವಹಾರಗಳು ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಆ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ನೌಕರರಿಗೆ ನಿವೇಶನ ಹಂಚಿಕೆ ಮಾಡುವ ಉದ್ದೇಶಕ್ಕಾಗಿ ಎಂಪ್ಲಾಯೀಸ್ ವೆಲ್‌ಫೇರ್ ಅಸೋಸಿಯೇಶನ್‌ಗೆ ಭೂಮಿಯನ್ನು ಮಂಜೂರು ಮಾಡಲಾಗಿದೆಯೇ ; (ವಿವರ ನೀಡುವುದು)

(ಇ) ಇಲ್ಲವಾದಲ್ಲಿ, ಎಂಪ್ಲಾಯೀಸ್ ವೆಲ್‌ಫೇರ್ ಅಸೋಸಿಯೇಷನ್ ನೌಕರರಿಗೆ ಮತ್ತು ಇತರರಿಗೆ ನಿವೇಶನ ಹಂಚಿಕೆ ಮಾಡಿರುವ ಸರ್ಕಾರಿ ಭೂಮಿ ಯಾವುದು ? (ಸಂಪೂರ್ಣ ಮಾಹಿತಿ ನೀಡುವುದು)